ಆ) ಈ ಖಾಲಿ ಹುದ್ದೆಗಳನ್ನು ಸಾಮಾನ್ಯ ನೇಮಕಾತಿ ನಿಯಮಗಳನ್ವಯ ನೇಮಕಾತಿ ಮಾಡಲು ನಿರ್ಧರಿಸಿದ್ದು ಅದರಂತೆ ಹುದ್ದೆಗಳನ್ನು ತುಂಬಲು ಅನುಮತಿ ನೀಡಲಾಗಿದೆ. ನೇಮಕಾತಿ ಪ್ರಕ್ರಿಯೆಗಳು ಪ್ರಾರಂಭವಾಗಿವೆ. ಸೆಪ್ಟೆಂಬರ್ ತಿಂಗಳ ಅಂತ್ಯದೊಳಗೆ ನೇಮಕಾತಿ ಕಾರ್ಯವನ್ನು ಮುಗಿಸಲಾಗುವುದು.

ವಿಷಯ:- ಹುಬ್ಬಳ್ಳಿ ಕಿಮ್ಸ್ ಆಸ್ಪತ್ರೆಯ ಕೆಲಸಗಾರರಿಗೆ ವಸತಿ ನಿವೇಶನ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 130 (469)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮಾಂತರ):- ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಹುಬ್ಬಳ್ಳಿ ಕಿಮ್ಸ್ ಆಸ್ಪತ್ರೆಯಲ್ಲಿ 700 ಕೆಲಸಗಾರರು ಸೇವೆ ಸಲ್ಲಿಸುತ್ತಿರುವುದು ನಿಜವೇ?

ಆ) ಹುಬ್ಬಳ್ಳಿಯ ಉಣಕಲ್ ಗ್ರಾಮದ ಸರ್ವೆ ನಂಬರ್ 46, 47 ಮತ್ತು 68ರಲ್ಲಿನ ಜಮೀನಿನಲ್ಲಿ ಇವರಿಗೆ ವಸತಿ ನಿವೇಶನ ಒದಗಿಸಲು ಕ್ರಮ ಕೈಗೊಳ್ಳಲಾಗುವುದೇ?

ಇ) ಹಾಗಿದ್ದಲ್ಲಿ ಈ ನಿವೇಶನಗಳನ್ನು ಇವರ ವಶಕ್ಕೆ ಯಾವಾಗ ಕೊಡಲಾಗುವುದು?

ಡಾ॥ ಎಂ.ಶಂಕರನಾಯಕ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು):-

ಅ) ಕರ್ನಾಟಕ ವೈದ್ಯಕೀಯ ಮಹಾವಿದ್ಯಾಲಯ ಆಸ್ಪತ್ರೆ, ಹುಬ್ಬಳ್ಳಿಯಲ್ಲಿ ಒಟ್ಟು ಮಂಜೂರಾದ ಕೆಲಸಗಾರರ ಸಂಖ್ಯೆ : 589 ಮತ್ತು ಹಾಲಿ ಕಾರ್ಯ ನಿರ್ವಹಿಸುತ್ತಿರುವವರು ಒಟ್ಟು 473 ಮಾತ್ರ.

ಆ) ಇಲ್ಲಾ.

ಇ) ಉದ್ಭವಿಸುವುದಿಲ್ಲ.

ವಿಷಯ: ಹುಬ್ಬಳ್ಳಿಯ ಕರ್ನಾಟಕ ವೈದ್ಯಕೀಯ ಮಹಾವಿದ್ಯಾಲಯ ಸ್ವಾಯತ್ತ ಸಂಸ್ಥೆಯಾಗಿ ಪರಿವರ್ತನೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 131 (468)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮಾಂತರ):- ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿಯ ಕರ್ನಾಟಕ ವೈದ್ಯಕೀಯ ಮಹಾವಿದ್ಯಾಲಯವನ್ನು ಸ್ವಾಯತ್ತ ಸಂಸ್ಥೆಯನ್ನಾಗಿ ಪರಿವರ್ತಿಸಿ ನಿರ್ದೇಶಕರನ್ನು ನೇಮಕ ಮಾಡಿರುವುದು ಸರ್ಕಾರಕ್ಕೆ ಗಮನಕ್ಕೆ ಬಂದಿದೆಯೇ?

ಆ) ಕರ್ನಾಟಕ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಆಡಳಿತ ನಿಯಮಗಳು